ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 12.12.2023

## ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ.

### ಕಳೆದ ಐದು ದಿನಗಳ ಹವಾಮಾನ ಸಾರಂಶ

| ನಿಯತಾಂಕಗಳು | 08.12.2023 | 09.12.2023 | 10.12.2023 | 11.12.2023 | 12.12.2023 |
|---|---|---|---|---|---|
| ಮಳೆ (ಮಿ ಮೀ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ (ಡಿ.ಸೆ.) | 30.0 | 29.8 | 29.4 | 29.2 | 29.0 |
| ಕನಿಷ್ಠ ಉಷ್ಣಾಂಶ (ಡಿ.ಸೆ.) | 18.8 | 19.0 | 18.2 | 19.2 | 18.4 |
| ಮೋಡ (ಪ್ರಮಾಣ) | 2 | 2 | 4 | 4 | 4 |
| ಆರ್ದ್ರತೆ 7.20 ಬೆ (ಶೇ) | 93 | 90 | 81 | 74 | 90 |
| ಆರ್ದ್ರತೆ 2.20 ಮ (ಶೇ) | 63 | 63 | 66 | 61 | -- |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 2.0 | 5.2 | 5.2 | 8.3 | 4.8 |
| ಗಾಳಿಯ ದಿಕ್ಕು (ಡಿಗ್ರಿ) | 140 | 140 | 140 | 90 | 140 |

### ಈ ವಾರದ ಹವಾಮಾನ ಮುನ್ಸೂಚನೆ (ಭಾರತೀಯ ಹವಾಮಾನ ಇಲಾಖೆ)
(ದಿನಾಂಕ 13–12–2023 ರಿಂದ 17–12–2023 ವರೆಗೆ)

| ನಿಯತಾಂಕಗಳು | 13.12.2023 | 14.12.2023 | 15.12.2023 | 16.12.2023 | 17.12.2023 |
|---|---|---|---|---|---|
| ಮಳೆ (ಮಿ ಮೀ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ (ಡಿ.ಸೆ.) | 29 | 29 | 29 | 29 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ.) | 20 | 20 | 20 | 20 | 20 |
| ಮೋಡ (ಪ್ರಮಾಣ) | 5 | 4 | 4 | 4 | 4 |
| ಆರ್ದ್ರತೆ 7.20 ಬೆ (ಶೇ) | 86 | 86 | 86 | 88 | 88 |
| ಆರ್ದ್ರತೆ 2.20 ಮ (ಶೇ) | 62 | 62 | 62 | 64 | 64 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 2 | 3 | 4 | 4 | 5 |
| ಗಾಳಿಯ ದಿಕ್ಕು (ಡಿಗ್ರಿ) | 72 | 72 | 68 | 68 | 69 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆಯಾಗುವ ಸಾಧ್ಯತೆ ಕಡಿಮೆ. ದಿನದ ಗರಿಷ್ಠ ಉಷ್ಣಾಂಶ **29.0 $^{o}$C** ಮತ್ತು ಕನಿಷ್ಠ **20.0$^{o}$C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **86-88** % ಇದ್ದು **62-64** % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **2-5** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಮುಂಗಾರು ಬೆಳೆಗಳು | ಕಟಾವು ಹಂತ | ➢ ನಾಲ್ಕೈದು ದಿನಗಳಲ್ಲಿ ಒಣ ಹವೆ ಮುಂದುವರಿಯುವುದರಿಂದ ರಾಗಿ, ತೊಗರಿ ಮತ್ತು ಇನ್ನಿತರ ಮುಂಗಾರು ಬೆಳೆಗಳನ್ನು ಕಟಾವು ಮಾಡಲು ಸೂಕ್ತ ಕಾಲ ಮತ್ತು ಕಟಾವು ಮಾಡಿರುವ ಬೆಳೆಗಳನ್ನು ಬಿಸಿಲಿನಲ್ಲಿ ಒಣಗಿಸಿ ಶೇಖರಿಸಿ.<br>➢ ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ಧಾನ್ಯಗಳು ತೇವಾಂಶ ಶೇ. 11 ರಿಂದ 12, ದ್ವಿದಳಧಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.8 ಮತ್ತು ತರಕಾರಿ ಬೀಜಗಳು ಶೇ 5 ರಿಂದ 6 ರಷ್ಟಿರಬೇಕು. ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು. |

| | | |
|---|---|---|
| | | ➢ ದ್ವಿದಳಧಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕಿ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು. |
| **ಹಿಂಗಾರು ಬೆಳೆಗಳು** | ಬೆಳವಣಿಗೆ ಮತ್ತು ಹೂವಿನ ಹಂತ | **ಈ ಕೆಳಗಿನ ಕಡಿಮೆ ಅವಧಿ ಹಿಂಗಾರು ಬೆಳೆ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>➢ ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1,<br>➢ ಅಂತರ ಬೆಳೆ ಬೇಸಾಯ ಕ್ರಮಗಳನ್ನು ಅನುಸರಿಸಿ ಇದರಿಂದ ಕಳೆಗಳು ನಾಶವಾಗಿ ಮಣ್ಣಿನ ತೇವಾಂಶವನ್ನು ಸಂರಕ್ಷಣೆ ಮಾಡಲಾಗುತ್ತದೆ.<br>➢ ಗೊಬ್ಬರದ ಗಿಡಗಳನ್ನು ಮತ್ತು ಕಳೆಗಿಡಗಳನ್ನು ಭೂ ಹೊದಿಕೆಯಾಗಿ ಬೆಳೆಗಳಿಕೆ ಹಾಕಿ ಇದರಿಂದ ಗೊಬ್ಬರ ಮತ್ತು ತೇವಾಂಶದ ಸಂರಕ್ಷಣೆಯಾಗುತ್ತದೆ. |
| ಮಾವು | ಹೂವಿನ ಕುಡಿ ಚಿಗುರುವ ಮತ್ತು ಹೂವಿನ ಹಂತ | 1. ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ)<br>2. ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>3. ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ.<br>4. ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಛಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು.<br>5. ಅದರ ಜೊತೆಗೆ ಮರಗಳಲ್ಲಿ ಕಣ್ಣಾಡಿಸಿ ಪರಾವಲಂಬಿ ಸಸ್ಯಗಳಾದ ಬದನಿಕೆ (ಕಸ್ಕ್ಯುಟ, ಲೊರಾಂಥಸ್) ಮುಂತಾದುವುಗಳನ್ನು ಸವರಿತೆಗೆಯಬೇಕು.ಅಧಿಕ ಸಾಂದ್ರತೆ ನೆಡುವಿಕೆಯಲ್ಲಿಕಾಂಡ ಪರಾವಲಂಬಿ ಸಸ್ಯಗಳ ಹಾವಳಿ ಜಾಸ್ತಿಯಿರುತ್ತದೆ.<br>6. ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಛಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು. |
| **ಪಶುಸಂಗೋಪನೆ** | | 1. ತಾಪಮಾನದಲ್ಲಿ ಹಠಾತ್ ಕುಸಿತದಿಂದ ಪ್ರಾಣಿಗಳನ್ನು ರಕ್ಷಿಸಲು ರಾತ್ರಿಯ ಸಮಯದಲ್ಲಿ ಮುಚ್ಚಿದ ಶೆಡ್ ಪ್ರದೇಶದಲ್ಲಿ ಇರಿಸಿ.<br>2. ಪ್ರಾಣಿಗಳ ಶೆಡ್‌ಗಳಲ್ಲಿನ ನೆಲ ಹಾಸು/ಹುಲ್ಲನ್ನು ಪ್ರತಿದಿನ ಬದಲಾಯಿಸಬೇಕು.<br>3. ಕೆಲವು ಪ್ರದೇಶಗಳಲ್ಲಿ ಚಳಿಗಾಲದ ತಿಂಗಳುಗಳಲ್ಲಿ ಉಂಟಾಗುವ ಕೊರತೆಯ ಅವಧಿಗೆ ಮೇವನ್ನು ಸಂಗ್ರಹಿಸಲು ಸರಿಯಾದ ಕಾಳಜಿ ವಹಿಸಬೇಕು, ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಕತ್ತರಿಸಬೇಕು. |
| **ಕೋಳಿ ಸಾಕಾಣಿಕೆ** | | 1. ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>2. ಮೊಟ್ಟೆಯಿಂದ ಮರಿಗಳ ಬಂದ ನಂತರ ಮೊದಲನೇ ವಾರದಲ್ಲಿ ಶಾಖದ ಬುಟ್ಟಿಯ ಕೆಳಗೆ ಬಿಡಬೇಕು ಮತ್ತು ಶಾಖದ ಬುಟ್ಟಿಯ ಅಂಚಿನಲ್ಲಿ ನೆಲಕ್ಕೆ ಹರಡಿರುವ ಸತ್ತೆಯಿಂದ 8 ಸೆ.ಮೀ. ಮೇಲೆ $35^0$ ಸೆ. ಶಾಖ ಇರಬೇಕಾಗುತ್ತದೆ. ಅನಂತರ ವಾರಕ್ಕೆ $2^0$ ಸೆ. ನಂತೆ ಕಡಿಮೆ ಮಾಡಿ, ನಾಲ್ಕು ವಾರಗಳ ನಂತರ ಬಿಸಿ ಬುಟ್ಟಿಗಳನ್ನು ತೆಗೆಯಬೇಕು.<br>3. ಚಳಿಗಾಲವಿರುವುದರಿಂದ ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಉಷ್ಣಾಂಶದ ಸ್ಥಿರತೆ ಕಾಪಾಡಲು ವಿದ್ಯುತ್ ಬಲ್ಬ್ ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುತ್ತದೆ.<br>4. ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಕಿಟಕಿಯಲ್ಲಿ ಚಳಿಗಾಳಿಯು ಹೆಚ್ಚಾಗಿ ಬೀಸುವುದರಿಂದ ಪರದೆಯನ್ನು ಮುಚ್ಚಿ ಚಳಿಯಿಂದ ರಕ್ಷಿಸಬೇಕು. |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಫ್:**

➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.

➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.